**All India Radio: Bangalore**
**National Bulletin In Kannada**
**25.07.2025 7.35 am**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**<><><><>**

**ಮುಖ್ಯಾಂಶಗಳು :**

೧. ಎರಡು ದಿನಗಳಿಗಾಗಿ ಮಾಲ್ಡೀವ್ಸ್‌ಗೆ ಭೇಟಿ ನೀಡಲಿರುವ ಪ್ರಧಾನಿ ನರೇಂದ್ರ ಮೋದಿ

೨. ಭಾರತ - ಬ್ರಿಟನ್ ಮುಕ್ತ ವ್ಯಾಪಾರ ಒಪ್ಪಂದ ಒಂದು ಹೊಸ ಯುಗಾರಂಭ - ಸಚಿವ ಪಿಯೂಷ್ ಗೋಯಲ್

೩. ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ಪುನಃ ಆರು ತಿಂಗಳವರೆಗೆ ವಿಸ್ತರಿಸುವ ನಿರ್ಣಯಕ್ಕೆ ಲೋಕಸಭೆಯಲ್ಲಿ ಅನುಮೋದನೆ

೪. ಫಿಡೆ ಮಹಿಳಾ ಚೆಸ್ ವಿಶ್ವಕಪ್ ಫೈನಲ್‌ನಲ್ಲಿ ಭಾರತೀಯರ ನಡುವಯೇ ಅಂತಿಮ ಸೆಣಸಾಟ - ಚೆಸ್‌ನಲ್ಲಿ ಭಾರತಕ್ಕೆ ಮತ್ತೊಂದು ಮೈಲಿಗಲ್ಲು

**><><><><><><><><**

ಯಶಸ್ವಿ ಬ್ರಿಟನ್ ಪ್ರವಾಸ ಸಂಪನ್ನಗೊಳಿಸಿರುವ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಇಂದಿನಿಂದ ಎರಡು ದಿನಗಳ ಕಾಲ ಮಾಲ್ಡೀವ್ಸ್‌ಗೆ ಅಧಿಕೃತ ಭೇಟಿ ನೀಡಲಿದ್ದಾರೆ. ೨೦೨೩ರ ನವೆಂಬರ್‌ನಲ್ಲಿ ಅಧ್ಯಕ್ಷ ಡಾ. ಮೊಹಮದ್ ಮುಯಿಝು ಅಧಿಕಾರಕ್ಕೆ ಬಂದ ನಂತರ ಪ್ರಧಾನಮಂತ್ರಿ ಮೋದಿಯವರ ಮೊದಲ ಭೇಟಿ ಇದಾಗಿದೆ. ತಮ್ಮ ಭೇಟಿಯ ಭಾಗವಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಮಾಲ್ಡೀವ್ಸ್ ಅಧ್ಯಕ್ಷರೊಂದಿಗೆ 'ಸಮಗ್ರ ಆರ್ಥಿಕ ಹಾಗೂ ಕಡಲ ಭದ್ರತಾ ಪಾಲುದಾರಿಕೆಯ ಸಮಗ್ರ ಪ್ರಗತಿ ಪರಿಶೀಲನೆ ನಡೆಸಲಿದ್ದಾರೆ. ಪ್ರಧಾನಮಂತ್ರಿ ಅವರು ಇತರ ಮಾಲ್ಡೀವ್ಸ್ ನಾಯಕರನ್ನು ಭೇಟಿ ಮಾಡಿ, ದ್ವಿಪಕ್ಷೀಯ ವಿಷಯಗಳ ಕುರಿತಂತೆ ಚರ್ಚೆ ನಡೆಸಲಿದ್ದಾರೆ. ಈ ಭೇಟಿಯಲ್ಲಿ ಹಲವು ಒಪ್ಪಂದಗಳು ಹಾಗೂ ದ್ವಿಪಕ್ಷೀಯ ಸಹಕಾರಕ್ಕೆ ಸಂಬಂಧಿಸಿದ ತಿಳಿವಳಿಕಾ ಒಪ್ಪಂದಗಳಿಗೆ ಸಹಿ ಹಾಕಲಾಗುವ ನಿರೀಕ್ಷೆಯಿದೆ. ಇದಲ್ಲದೇ ಹಲವು ಮೂಲಸೌಕರ್ಯ ಯೋಜನೆಗಳ ಉದ್ಘಾಟನೆ ಸಹ ನಡೆಯಲಿದೆ. ನಾಳೆ, ಪ್ರಧಾನಮಂತ್ರಿ ಅವರು ಮಾಲ್ಡೀವ್ಸ್‌ನ ೬೦ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಗೌರವ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಪ್ರಸಕ್ತ ವರ್ಷ, ಭಾರತ ಮತ್ತು ಮಾಲ್ಡೀವ್ಸ್ ನಡುವೆ ರಾಜತಾಂತ್ರಿಕ ಸಂಬಂಧ ಸ್ಥಾಪನೆಯ ೬೦ನೇ ವಾರ್ಷಿಕೋತ್ಸವೂ ಆಗಿದೆ. ಪ್ರಧಾನಮಂತ್ರಿಯವರ ಈ ಭೇಟಿಯಿಂದ ಭಾರತ ಮತ್ತು ಮಾಲ್ಡೀವ್ಸ್ ನಡುವಿನ ದ್ವಿಪಕ್ಷೀಯ ಸಹಕಾರಕ್ಕೆ ಇನ್ನಷ್ಟು ವೇಗ ಸಿಗಲಿದೆ ಎಂದು ನಿರೀಕ್ಷಿಸಲಾಗಿದೆ. ಇದು ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಮಾಲ್ಡೀವ್ಸ್ ಗೆ ಒಟ್ಟಾರೆ ಮೂರನೇ ಭೇಟಿಯಾಗಿದೆ.

ಪ್ರಧಾನಿ ಭೇಟಿ ಕುರಿತಂತೆ ಭಾರತದ ಹೈಕಮಿಷನರ್ ಜಿ. ಬಾಲಸುಬ್ರಮಣಿಯನ್, ಮಾಹಿತಿ ನೀಡಿದ್ದು, ಉಭಯ ನಾಯಕರು ಭಾರತ-ಮಾಲ್ಡೀವ್ಸ್ 'ಸಮಗ್ರ ಆರ್ಥಿಕ ಹಾಗೂ ಸಮುದ್ರ ಭದ್ರತಾ ಸಹಭಾಗಿತ್ವದ ಸಂಯುಕ್ತ ದೃಷ್ಟಿಕೋನ'ದ ಅನುಷ್ಠಾನದ ಪ್ರಗತಿಯನ್ನು ಪರಿಶೀಲಿಸಲಿದ್ದಾರೆ. ಭಾರತ, ಮಾಲಿದ್ವೀಪ್‌ನ ಅಭಿವೃದ್ಧಿ ಪಥದಲ್ಲಿ ಪ್ರಮುಖ ಪಾಲುದಾರ ರಾಷ್ಟ್ರವಾಗಿದೆ ಎಂದು ತಿಳಿಸಿದ್ದಾರೆ.

ಧ್ವನಿ: ಹೈಕಮಿಷನರ್ ಜಿ.ಬಾಲಸುಬ್ರಮಣಿಯನ್ ( ೨೪ ಸೆಕೆಂಡುಗಳು)

><><><><><><><><

ಪ್ರಧಾನಮಂತ್ರಿ ನರೇಂದ್ರ ಮೋದಿ ನಿನ್ನೆ ಇಂಗ್ಲೆಂಡಿನ ಸ್ಯಾಂಡ್ರಿಂಗ್‌ಹ್ಯಾಮ್ ಎಸ್ಟೇಟ್‌ನಲ್ಲಿ ಬ್ರಿಟನ್ ದೊರೆ ಮೂರನೇ ಚಾರ್ಲ್ಸ್ ಅವರನ್ನು ಭೇಟಿಯಾಗಿ, ಭಾರತ-ಬ್ರಿಟನ್ ನಡುವಿನ ದ್ವಿಪಕ್ಷೀಯ ಸಂಬಂಧಗಳ ಕುರಿತು ಸುದೀರ್ಘ ಚರ್ಚೆ ನಡೆಸಿದರು. ಈ ವೇಳೆ ಆಯುರ್ವೇದ, ಯೋಗ ಹಾಗೂ 'ಮಿಷನ್ ಲೈಫ್' ನಂತಹ ಭಾರತದ ಪಾರಂಪಾರಿಕ ಜ್ಞಾನ ವ್ಯವಸ್ಥೆಗಳನ್ನು ಬ್ರಿಟನ್‌ನಲ್ಲಿ ಪ್ರಚಲಿತಗೊಳಿಸಲು ಸಹಕಾರದ ಸಾಧ್ಯತೆಗಳ ಕುರಿತು ಚರ್ಚೆ ನಡೆಸಲಾಗಿದೆ. ಬ್ರಿಟನ್‌ನ ಜನತೆಗೂ ಈ ಪರಿಕಲ್ಪನೆಗಳ ಲಾಭ ಒದಗಿಸಲು ಒಟ್ಟಿಗೆ ಕೆಲಸ ಮಾಡುವ ಬಗ್ಗೆ ಚರ್ಚೆಯಲ್ಲಿ ಒಮ್ಮತ ವ್ಯಕ್ತವಾಗಿದೆ. ಇದೇ ಸಂದರ್ಭದಲ್ಲಿ ಪ್ರಧಾನಿ ಮೋದಿ ಅವರು 'ತಾಯಿಯ ಹೆಸರಿನಲ್ಲಿ ಒಂದು ಗಿಡ' ಅಭಿಯಾನದ ಭಾಗವಾಗಿ ಒಂದು ಸಸಿ ದೊರೆ ಮೂರನೇ ಚಾರ್ಲ್ಸ್ ಅವರಿಗೆ ಉಡುಗೊರೆಯಾಗಿ ನೀಡಿದರು. ಈ ಭೇಟಿ ಭಾರತ-ಬ್ರಿಟನ್ ನಡುವಿನ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವತ್ತ ಇನ್ನೊಂದು ಮಹತ್ವದ ಹೆಜ್ಜೆಯಾಗಿದ್ದು, ಮುಂದಿನ ದಿನಗಳಲ್ಲಿ ದ್ವಿಪಕ್ಷೀಯ ಸಹಕಾರ ಹೊಸ ಎತ್ತರ ತಲುಪಲಿದೆ ಎಂಬ ನಿರೀಕ್ಷೆ ಮೂಡಿಸಿದೆ.

><><><><><><><><

ಭಾರತ ಮತ್ತು ಬ್ರಿಟನ್ ನಡುವೆ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಲಾಗಿರುವ ಕುರಿತು ಭಾರತೀಯ ಕೈಗಾರಿಕಾ ಸಂಘಟನೆ - ಸಿಐಐ ಹರ್ಷವ್ಯಕ್ತಪಡಿಸಿದ್ದು, ಇದನ್ನು ದ್ವಿಪಕ್ಷೀಯ ಆರ್ಥಿಕ ಸಂಬಂಧಗಳಲ್ಲಿ ಒಂದು ಪರಿವರ್ತನಾ ಮೈಲಿಗಲ್ಲು ಎಂದು ಶ್ಲಾಘಿಸಿದೆ. ಸಿಐಐ ಆಯೋಜಿಸಿದ್ದ ೧೬ ಸದಸ್ಯರ ಭಾರತೀಯ ಉದ್ಯಮಿಗಳ ನಿಯೋಗ, ಭಾರತ-ಬ್ರಿಟನ್ ಸಿಇಒ ಫೋರಮ್‌ನ ಸಹ ಅಧ್ಯಕ್ಷ ಸುನಿಲ್ ಭಾರ್ತಿ ಮಿತ್ತಲ್ ನೇತೃತ್ವದ ನಿಯೋಗ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ನಿಯೋಗ ಮಟ್ಟದ ಸಭೆಯಲ್ಲಿ ಭಾಗವಹಿಸಿತು. ಈ ಸಂದರ್ಭದಲ್ಲಿ ಮಾತನಾಡಿದ ಸುನೀಲ್ ಮಿತ್ತಲ್, "ಭಾರತ-ಬ್ರಿಟನ್ ಮುಕ್ತ ವ್ಯಾಪಾರ ಒಪ್ಪಂದ ನಾವೀನ್ಯತೆಯನ್ನು ಉತ್ತೇಜಿಸಲಿದ್ದು, ಮಾರುಕಟ್ಟೆ ಪ್ರವೇಶವನ್ನು ಸುಲಭಗೊಳಿಸಲಿದೆ ಹಾಗೂ ಹೂಡಿಕೆಯನ್ನು ಉತ್ತೇಜಿಸಲಿದೆ. ಉಭಯ ರಾಷ್ಟ್ರಗಳ ಉದ್ಯಮಗಳಿಗೆ ಇದರಿಂದ ಲಾಭವಾಗಲಿದೆ" ಎಂದು ಅಭಿಪ್ರಾಯಪಟ್ಟರು. ಸಿಐಐ ನಿಯೋಗ ಬ್ರಿಟನ್‌ನ ಉನ್ನತ ಮಟ್ಟದ ಸರ್ಕಾರಿ ಅಧಿಕಾರಿಗಳು ಮತ್ತು ಪ್ರಮುಖ ಕಂಪನಿಗಳ ಸಿಇಒಗಳೊಂದಿಗೆ ದ್ವಿಪಕ್ಷೀಯ ಸಹಕಾರದ ಸಾದ್ಯತೆಗಳ ಕುರಿತು ಚರ್ಚೆ ನಡೆಸಿತು.

ಇದರಡಿ ಡಿಜಿಟಲ್ ಪರಿವರ್ತನೆ, ತಂತ್ರಜ್ಞಾನ, ಶುದ್ಧ ಇಂಧನ, ಆರೋಗ್ಯ, ಸುಸ್ಥಿರತೆ ಸೇರಿದಂತೆ ವಿವಿಧ ವಿಷಯಗಳಲ್ಲಿ ಒಟ್ಟಾಗಿ ಕೆಲಸ ಮಾಡುವ ನಿರೀಕ್ಷೆ ವ್ಯಕ್ತಪಡಿಸಲಾಯಿತು.

><><><><><><><><

ಪ್ರಧಾನಿ ನರೇಂದ್ರ ಮೋದಿ ಅವರು ಇಂದಿಗೆ ತಮ್ಮ ಸೇವೆಯ ೪ ಸಾವಿರದ ೭೮ ದಿನಗಳನ್ನು ಪೂರೈಸುವ ಮೂಲಕ ಎರಡನೇ ಅತಿಹೆಚ್ಚು ಕಾಲ ಸೇವೆ ಸಲ್ಲಿಸಿದ ಪ್ರಧಾನಿಯಾಗಿ, ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ ದಾಖಲೆಯನ್ನು ಮೀರಿಸಿದ್ದಾರೆ. ಮಾಜಿ ಪ್ರಧಾನಿ ಇಂದಿರಾ ಗಾಂಧಿ ಜನವರಿ ೨೪, ೧೯೬೬ ರಿಂದ ಮಾರ್ಚ್ ೨೪, ೧೯೭೭ ರವರೆಗೆ ಸತತ ೪ ಸಾವಿರದ ೭೭ ದಿನಗಳ ಕಾಲ ಪ್ರಧಾನಿಯಾಗಿ ಸೇವೆ ಸಲ್ಲಿಸಿದ್ದ ದಾಖಲೆಯನ್ನು ಹಿಂದಿಕ್ಕಿದ್ದಾರೆ. ಈ ಮೈಲಿಗಲ್ಲಿನೊಂದಿಗೆ, ದೇಶದ ಮೊದಲ ಪ್ರಧಾನಿ ಜವಾಹರಲಾಲ್ ನೆಹರು ಅವರ ನಂತರ ಪ್ರಧಾನಿ ನರೇಂದ್ರ ಮೋದಿ ಅವರು ಭಾರತದ ಇತಿಹಾಸದಲ್ಲಿ ಎರಡನೇ ಅತಿ ಹೆಚ್ಚು ಕಾಲ ಪ್ರಧಾನಿಯಾಗಿ ಸೇವೆ ಸಲ್ಲಿಸಿದವರಾಗಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಸತತ ೪ ಸಾವಿರದ ೭೮ ದಿನಗಳನ್ನು ಅಧಿಕಾರದಲ್ಲಿ ಪೂರೈಸುತ್ತಿದ್ದಂತೆ, ಅವರು ಹಲವಾರು ಐತಿಹಾಸಿಕ ಹೆಗ್ಗಳಿಕೆಗಳಿಗೆ ಪಾತ್ರರಾಗಲಿದ್ದಾರೆ. ಪ್ರಧಾನಿ ಮೋದಿ ಅವರು ಸ್ವಾತಂತ್ರ್ಯದ ನಂತರ ಜನಿಸಿದ ಮೊದಲ ಮತ್ತು ಏಕೈಕ ಅತಿ ಹೆಚ್ಚು ಕಾಲ ಸೇವೆ ಸಲ್ಲಿಸಿದ ಕಾಂಗ್ರೆಸ್ಸೇತರ ಪ್ರಧಾನಿಯಾಗಿದ್ದಾರೆ. ಎರಡು ಪೂರ್ಣ ಅವಧಿಗಳನ್ನು ಪೂರ್ಣಗೊಳಿಸಿದ ಮತ್ತು ಬಹುಮತದೊಂದಿಗೆ ಎರಡು ಬಾರಿ ಮರು ಆಯ್ಕೆಯಾದ ಮೊದಲ ಮತ್ತು ಏಕೈಕ ಕಾಂಗ್ರೆಸ್ಸೇತರ ನಾಯಕ ಹಾಗೂ ಲೋಕಸಭೆಯಲ್ಲಿ ಸ್ವಂತ ಬಹುಮತ ಪಡೆದ ಏಕೈಕ ಕಾಂಗ್ರೆಸ್ಸೇತರ ಪ್ರಧಾನಿ ನರೇಂದ್ರ ಮೋದಿ ಅವರಾಗಿದ್ದಾರೆ. ಈ ನಡುವೆ ೧೯೭೧ ರಲ್ಲಿ ಇಂದಿರಾ ಗಾಂಧಿಯವರ ನಂತರ ಪೂರ್ಣ ಬಹುಮತದೊಂದಿಗೆ ಅಧಿಕಾರಕ್ಕೆ ಮರಳಿದ ಮೊದಲ ಹಾಲಿ ಪ್ರಧಾನಿ ಮೋದಿಯವರಾಗಿದ್ದಾರೆ.

><><><><><><><><

ಭಾರತ ಮತ್ತು ಬ್ರಿಟನ್ ನಿನ್ನೆ ಐತಿಹಾಸಿಕ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಿವೆ. ಕೇಂದ್ರ ವಾಣಿಜ್ಯ ಮತ್ತು ಉದ್ಯಮ ಸಚಿವ ಪಿಯೂಷ್ ಗೋಯಲ್ ಅವರು ಈ ಒಪ್ಪಂದವನ್ನು ಭಾರತದ ವ್ಯಾಪಾರ, ಹೂಡಿಕೆ ಮತ್ತು ಉದ್ಯೋಗ ಕ್ಷೇತ್ರಗಳಿಗೆ ಒಂದು ಮೈಲಿಗಲ್ಲು ಎಂದಿದ್ದಾರೆ. ಲಂಡನ್‌ನಲ್ಲಿ ಪ್ರಸಾರ್ ಭಾರತಿಗೆ ನೀಡಿದ ವಿಶೇಷ ಸಂದರ್ಶನದಲ್ಲಿ ಮಾತನಾಡಿದ ಅವರು, ಈ ಒಪ್ಪಂದ ರೈತರು, ಸಣ್ಣ ವ್ಯಾಪಾರಿಗಳು, ಸಣ್ಣ, ಅತೀಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು, ನವೋದ್ಯಮಗಳು ಮತ್ತು ಇತರೆ ಸೇವಾ ಕ್ಷೇತ್ರಗಳಿಗೆ ಲಾಭದಾಯಕವಾಗಲಿದೆ ಈ ಒಪ್ಪಂದ ಭಾರತಕ್ಕೆ ಹೊಸ ಯುಗಾರಂಭವಾಗಲಿದ್ದು, ಇದರಿಂದ ಬ್ರಿಟನ್ ಮಾರುಕಟ್ಟೆ ಭಾರತೀಯ ವಸ್ತುಗಳು, ವೃತ್ತಿಪರರು, ಶಿಕ್ಷಣ, ಕೃಷಿ, ಆಹಾರ ಸಂಸ್ಕರಣಾ ಉತ್ಪನ್ನಗಳಿಗೆ ಮುಕ್ತವಾಗಲಿದೆ ಎಂದರು. ಈ ಒಪ್ಪಂದ ಬ್ರಿಟನ್‌ಗೆ ತಾತ್ಕಾಲಿಕ ಉದ್ಯೋಗಕ್ಕೆ ಹೋಗುವ ಭಾರತೀಯರಿಗೆ ಪ್ರಯೋಜನಕಾರಿಯಾಗಲಿದ್ದು, ಇದರಡಿ ಅವರು ಅಲ್ಲಿ ಸಾಮಾಜಿಕ ಭದ್ರತಾ ನಿಧಿಗೆ ಹಣ ಪಾವತಿಸುವ ಆವಶ್ಯಕತೆಯಿರುವುದಿಲ್ಲ ಎಂದು ತಿಳಿಸಿದರು.

><><><><><><><><

ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ಆಗಸ್ಟ್ ೧೩, ೨೦೨೫ ರಿಂದ ಮತ್ತೆ ಆರು ತಿಂಗಳವರೆಗೆ ವಿಸ್ತರಿಸಲಾಗಿದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಲೋಕಸಭೆಯಲ್ಲಿ ವಿಸ್ತರಣೆಗೆ ಅನುಮೋದನೆ ಕೋರಿ ನಿರ್ಣಯ ಮಂಡಿಸಿದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಸದನದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ಮುಂದುವರಿಸುವ ಕುರಿತ ನಿರ್ಣಯವನ್ನು ಅಂಗೀಕರಿಸಲಾಯಿತು. ದೀರ್ಘಕಾಲದ ಜನಾಂಗೀಯ ಹಿಂಸಾಚಾರದ ನಂತರ, ಫೆಬ್ರವರಿ ೧೩, ೨೦೨೫ ರಂದು ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ವಿಧಿಸಲಾಗಿತ್ತು. ಈ ನಡುವೆ ಭದ್ರತಾ ಪಡೆಗಳು ಮಣಿಪುರದಲ್ಲಿ ಶಾಂತಿ ಕದಡುವ ಗುಂಪುಗಳ ವಿರುದ್ಧ ಜಂಟಿ ಕಾರ್ಯಾಚರಣೆಯನ್ನು ಮುಂದುವರೆಸಿವೆ. ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಕಳೆದ ೨೪ ಗಂಟೆಗಳಲ್ಲಿ, ನಿಗಧಿತ ಸಂಘಟನೆಗಳೊಂದಿಗೆ ಸಂಪರ್ಕ ಹೊಂದಿರುವ ೧೦ ಉಗ್ರರನ್ನು ಬಂಧಿಸಲಾಗಿದೆ ಎಂದು ದೃಢಪಡಿಸಿದ್ದಾರೆ.

><><><><><><><><

ಜಾರ್ಜಿಯಾದ ಬಟುಮಿಯಲ್ಲಿ ನಡೆಯುತ್ತಿರುವ ಫಿಡೆ ಮಹಿಳಾ ಚೆಸ್ ವಿಶ್ವಕಪ್‌ನ ಅಂತಿಮ ಸ್ಪರ್ಧೆ ಇಬ್ಬರು ಭಾರತೀಯರ ನಡುನಿವ ಸೆಣಸಾಟಕ್ಕೆ ಸಾಕ್ಷಿಯಾಗಲಿದೆ. ಸೆಮಿಫೈನಲ್ ಪಂದ್ಯಗಳಲ್ಲಿ ಜಯ ಸಾಧಿಸಿದ ನಂತರ, ಭಾರತದ ದಿವ್ಯಾ ದೇಶ್ಮುಖ್ ಮತ್ತು ಕೊನೇರು ಹಂಪಿ ಫೈನಲ್‌ನಲ್ಲಿ ಮುಖಾಮುಖಿಯಾಗಲಿದ್ದಾರೆ. ಸೆಮಿಫೈನಲ್‌ನಲ್ಲಿ, ದಿವ್ಯಾ ದೇಶ್ಮುಖ್ ಅವರು ಚೀನಾದ ಗ್ರ್ಯಾಂಡ್‌ಮಾಸ್ಟರ್ ಟಾನ್ ಝೋಂಗ್ಯಿ ಅವರನ್ನು ಸೋಲಿಸಿದರು. ಇನ್ನೊಂದೆಡೆ, ಹಿರಿಯ ಆಟಗಾರ್ತಿ ಕೊನೇರು ಹಂಪಿ ಚೀನಾದ ಗ್ರ್ಯಾಂಡ್‌ಮಾಸ್ಟರ್ ಲೇ ಟಿಂಗ್‌ಜಿಯೆ ಅವರನ್ನು ಪರಾಭವಗೊಳಿಸಿದರು. ಈಗಾಗಲೇ, ಹಂಪಿ ಅವರು ಫಿಡೆ ವರ್ಲ್ಡ್ ಕಪ್ ಸೆಮಿಫೈನಲ್‌ಗೆ ಪ್ರವೇಶಿಸಿದ ಮೊದಲ ಭಾರತೀಯ ಮಹಿಳೆಯೆಂಬ ದಾಖಲೆ ನಿರ್ಮಿಸಿದ್ದರು. ಇನ್ನು ದಿವ್ಯಾ ದೇಶ್ಮುಖ್ ಸಹ ಮತ್ತೊರ್ವ ಭಾರತೀಯ ಆಟಗಾರ್ತಿ ಹರಿಕಾ ದ್ರೋಣವಲ್ಲಿಯನ್ನು ರ‍್ಯಾಪಿಡ್ ಟೈಬ್ರೇಕ್ ಪಂದ್ಯದಲ್ಲಿ ೨-೦ ಅಂತರದಿಂದ ಸೋಲಿಸಿ ಸೆಮಿಫೈನಲ್‌ಗೆ ಲಗ್ಗೆ ಇಟ್ಟಿದ್ದರು. ಭಾರತೀಯರ ನಡುವಿನ ಈ ಫೈನಲ್ ಪಂದ್ಯ ಭಾರತದ ಚೆಸ್ ಇತಿಹಾಸದಲ್ಲಿ ನೂತನ ಮೈಲಿಗಲ್ಲಾಗಿದ್ದು, ಜಾಗತಿಕ ಮಟ್ಟದಲ್ಲಿ ಭಾರತದ ಚೆಸ್ ಪ್ರಾಬಲ್ಯವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ.

><><><><><><><><